


Scanned with CamScanner




Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆ.ಮ.ಪಾ/ಸಕಾಅ/ಬೊಉ/ಪಿಆರ್/137/2020-21

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ
ಬೊಮ್ಮನಹಳ್ಳಿ ಉಪವಿಭಾಗ
ಕೋಡಿಚಿಕ್ಕನಹಳ್ಳಿ ಮುಖ್ಯರಸ್ತೆ, ಬಿಳೇಕಹಳ್ಳಿ
ಬೆಂಗಳೂರು-560076, ದಿನಾಂಕ: **17/02/2021**

## 188 ಬಿಳೇಕಹಳ್ಳಿ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ದಿನಾಂಕ:- 17/02/2021 ಬೆಳಿಗ್ಗೆ 10:30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ ಅಂಜಿನಪ್ಪ ಸಿ.ಟಿ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ನಡವಳಿಗಳು.

### ವಾರ್ಡ್ ಸಮಿತಿಯ ಹಾಜರಾದ ಸದಸ್ಯರು:-

| | | | |
|---|---|---|---|
| 1. | ಶ್ರೀ ಅಂಜಿನಪ್ಪ ಸಿ.ಟಿ | - | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು. |
| 2. | ಶ್ರೀ ಚೇತನ್ ಕೆ.ಎಂ | - | ಕಾರ್ಯದರ್ಶಿಗಳು ಹಾಗೂ ಸಹಯಕ ಅಭಿಯಂತರರು ವಾರ್ಡ್-188 |
| 3. | ಶ್ರೀ ಸುರೇಶ್ ಪ್ರಕಾಶ್ | - | ರಂಕಾ ಕಾಲೋನಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು. |
| 4. | ಶ್ರೀ ಶೃತಿ ರಾವ್ | - | ಸಾರ್ವಭೌಮ ನಗರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು. |

### ವಾರ್ಡ್ ಸಮಿತಿ ಸಭೆಗೆ ಹಾಜರಾದ ಅಧಿಕಾರಿಗಳು:-

| | | | |
|---|---|---|---|
| 1. | ಡಾ. ಕೃಷ್ಣಪ್ಪ | - | ಪಿ.ಎಚ್.ಸಿ ಕೆ.ಸಿ ಹಳ್ಳಿ. |
| 2. | ಶ್ರೀ ಅಮಿತ್ ಕುಮಾರ್ | - | ಸಹಾಯಕ ಅಭಿಯಂತರರು (BESCOM). |
| 3. | ಶ್ರೀ ವಿಕ್ರಾಂತ್ ಕೆ | - | ಸಹಾಯಕ ಅಭಿಯಂತರರು (SWD). |
| 4. | ಶ್ರೀ ರಮೇಶ್ | - | ಕಂದಾಯ ಪರಿವೀಕ್ಷಕರು. |
| 5. | ಶ್ರೀ ಪ್ರಕಾಶ್ | - | ಆರೋಗ್ಯ ಪರಿವೀಕ್ಷಕರು. |
| 6. | ಶ್ರೀ ಹನುಮಂತರಾಯ | - | ತೋಟಗಾರಿಕೆ ಇಲಾಖೆ. |
| 7. | ಶ್ರೀ ಹರ್ಷವರ್ಧನ್ | - | ಅರಣ್ಯ ಇಲಾಖೆ (ನಗರ). |
| 8. | ಶ್ರೀ ಜಯಪ್ರಕಾಶ್ ಬಿ.ಕೆ | - | ಸಹಾಯಕ ಅಭಿಯಂತರರು (BWSSB). |

ಶ್ರೀ ಅಂಜಿನಪ್ಪ ಸಿ.ಟಿ ನೋಡಲ್ ಅಧಿಕಾರಿ ವಾರ್ಡ್-188 ಬಿಳೇಕಹಳ್ಳಿ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ ವಾರ್ಡ್‌ನ ಕುಂದು ಕೊರತೆಗಳನ್ನು ಚರ್ಚಿಸುವುದಾಗಿ ತಿಳಿಸಿದರು.

- **ಬೃಹತ್ ನೀರುಗಾಲುವೆ ಬಗ್ಗೆ**

  ಬೃಹತ್ ನೀರುಗಾಲುವೆಯ ಸಹಾಯಕ ಅಭಿಯಂತರರು ಗೈರಾದ ಕಾರಣ ಸದರಿ ಬೃಹತ್ ನೀರುಗಾಲುವೆಯ ವಿಷಯದ ಬಗ್ಗೆ ಚರ್ಚೆಯಾಗಿರುವುದಿಲ್ಲ.

- **ಕಸ ಸಮಸ್ಯೆ ಮತ್ತು ನಿರ್ವಹಣೆ ಬಗ್ಗೆ**

  ರಂಕಾ ಕಾಲೋನಿಯ ಮುಖ್ಯರಸ್ತೆಯಲ್ಲಿ ಬರುವ ಖಾಲಿ ನಿವೇಶನದಲ್ಲಿರುವ ಡೆಬ್ರೀಸ್ ತೆಗೆಯಬೇಕಾಗಿ ವಾರ್ಡ್ ಸದಸ್ಯರಾದ ಶ್ರೀ ಸುರೇಶ್ ಪ್ರಕಾಶ್ ರವರು ತಿಳಿಸಿದರು. ಸದರಿ ವಿಷಯದ ಸಂಬಂಧ ನೋಡಲ್ ಅಧಿಕಾರಿಗಳು ಆರೋಗ್ಯ ಪರಿವೀಕ್ಷಕರಾದ ಶ್ರೀ ಪ್ರಕಾಶ್ ರವರಿಗೆ ಸೂಚಿಸಿದರು.

- **ಕೋವಿಡ್-19 ಬಗ್ಗೆ.**

  ವಾರ್ಡ್ ಸಂಖ್ಯೆ-188 ವ್ಯಾಪ್ತಿಯಲ್ಲಿ ಇಲ್ಲಿಯವರೆಗೂ ಒಟ್ಟಾರೆ 1351 ಜನರಿಗೆ ಕೋವಿಡ್ ದೃಢಿಕರಣವಾಗಿದ್ದು ಪ್ರಸ್ತುತ 109 ಜನರಿಗೆ ಕೋವಿಡ್ ಕಂಡುಬಂದಿದದು ಇಲ್ಲಿಯವರೆಗೂ ಕೋವಿಡ್‌ನಿಂದ 15 ಜನರು ಸಾವನ್ನಪ್ಪಿದ್ದು ಈ ಬಗ್ಗೆ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮತ್ತು ಮಾಸ್ಕ್ ಧರಿಸುವ ಬಗ್ಗೆ ಅರಿವು ಮೂಡಿಸಲು ಕೋವಿಡ್ ವಾರಿಯರ್ಸ್‌ಗೆ ಕ್ರಮವಹಿಸುವ ಬಗ್ಗೆ ಸಮಿತಿಯಲ್ಲಿ ತಿಳಿಯಪಡಿಸಲಾಯಿತು.

Scanned with CamScanner

- **ಬೀದಿ ದೀಪ ನಿರ್ವಹಣೆ ಬಗ್ಗೆ.**

ರಂಕಾ ಕಲೋನಿಯ ಮುಖ್ಯರಸ್ತೆಯಲ್ಲಿರುವ ಬೀಧಿದೀಪ ಕಂಬಗಳಿಗೆ ಅನಧಿಕೃತವಾಗಿ ಓ.ಎಫ್.ಸಿ ಕೇಬಲ್ ಹಗೂ ಇತ್ಯಾದಿ ಕೇಬಲ್‌ಗಳನ್ನು ತೆರೆಯುವ ಸಂಬಂಧ ಸಭೆಯಲ್ಲಿ ವಾರ್ಡಿನ ಸದಸ್ಯರು ಶ್ರೀ ಸುರೇಶ್ ಪ್ರಕಾಶ್ ರವರು ತಿಳಿಸಿದರು.

ವಾರ್ಡ್ ಸದಸ್ಯರಾದ ಶ್ರೀಮತಿ ಶೃತಿ ರಾವ್ ರವರು ಸಾರ್ವಭೌಮನಗರದ, 1ನೇ ಮುಖ್ಯರಸ್ತೆಯಲ್ಲಿ ಬರುವ 1ನೇ ಹಾಗೂ 4ನೇ ಅಡ್ಡರಸ್ತೆ ಹಾಗೂ 2ನೇ ಮುಖ್ಯರಸ್ತೆಯಲ್ಲಿ ಬರುವ 4ನೇ ಅಡ್ಡರಸ್ತೆಗಳಲ್ಲಿ ಬೀದಿ ದೀಪಗಳು ದುರಸ್ಥಿಗೊಂಡು ಕಾರ್ಯನಿರ್ವಹಿಸದೆ ಇರುವ ಬಗ್ಗೆ ಸಭೆಯಲ್ಲಿ ತಿಳಿಸಿದರು. ಈ ವಿಷಯದ ಸಂಬಂಧ ನೋಡಲ್ ಅಧಿಕಾರಿಯವರು ಬಿ.ಬಿ.ಎಂ.ಪಿ ವಿಧ್ಯುತ್ ವಿಭಾಗದ ಅಧಿಕಾರಿಗಳು ಮತ್ತೊಮ್ಮೆ ಗೈರಾದ ಕಾರಣ ಸದರಿಯವರಿಗೆ ದೂರವಾಣಿ ಮೂಲಕ ಸಂರ್ಪಕಿಸಿ ಈ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸುವಂತೆ ಕಾರ್ಯದರ್ಶಿಗಳಿಗೆ ತಿಳಿಸಿರುತ್ತಾರೆ.

ಮುಂದುವರೆದು ರಂಕಾ ಕಲೋನಿಯ ಮುಖ್ಯರಸ್ತೆಯಲ್ಲಿರುವ ಬೀಧಿದೀಪ ಕಂಬಗಳಿಗೆ ಅನಧಿಕೃತವಾಗಿ ಓ.ಎಫ್.ಸಿ ಕೇಬಲ್ ಹಗೂ ಇತ್ಯಾದಿ ಕೇಬಲ್‌ಗಳನ್ನು ತೆರೆವುಗೊಳಿಸುವ ಸಭೆಯಲ್ಲಿ ಸರ್ವಾನುಮತದಿಂದ ತಿರ್ಮಾನಿಸಲಾಗಿದ್ದು, ತೆರೆವುಗೊಳಿಸುವ ಸಂಬಂಧ ಬಿ.ಬಿ.ಎಂ.ಪಿ ವಿಧ್ಯುತ್ ವಿಭಾಗಕ್ಕೆ ಪತ್ರ ಬರೆಯಲು ನೋಡಲ್ ಅಧಿಕಾರಿಗಳು ವಾರ್ಡ್ ಕಾರ್ಯದರ್ಶಿಗಳಿಗೆ ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಮಸ್ಯೆಗಳ ಬಗ್ಗೆ**

ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಗೈರಾದ ಕಾರಣ ಸದರಿ ವಿಷಯದ ಬಗ್ಗೆ ಚರ್ಚೆಯಾಗಿರುವುದಿಲ್ಲ.

- **ಪಾದಚಾರಿ ಒತ್ತುವರಿ ಬಗ್ಗೆ.**

ಹಿಂದಿನ ಸಭೆಯಲ್ಲಿ ಅಯ್ಯಪ್ಪ ದೇವಸ್ಥಾನ ಪಾದಚಾರಿ ಮಾರ್ಗ ಒತ್ತುವರಿಯನ್ನು ತೆರೆವುಗೊಳಿಸುವಂತೆ ಸಭೆಯಲ್ಲಿ ಸದಸ್ಯರುಗಳು ತಿಳಿಸಿರುತ್ತಾರೆ. ಅದರಂತೆ ಈ ವಿಷಯದ ಸಂಬಂಧ ಸಹಾಯಕ ಅಭಿಯಂತರರು ಹಾಗೂ ಆರೋಗ್ಯ ಪರಿವೀಕ್ಷಕರು ಜಂಟಿಯಾಗಿ ಕಾರ್ಯಚರಣೆ ಮಾಡಿ ಪಾದಚಾರಿ ಮಾರ್ಗದಲ್ಲಿ ತಳ್ಳುವ ಬಂಡಿಗಳಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿರುವವರಿಗೆ ದಂಡ ವಿಧಿಸಿ ಕ್ರಮ ಜರುಗಿಸಲಾಗಿದೆಂದು ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಸದರಿ ರಸ್ತೆ ಬಧಿ ವ್ಯಾಪರಿಗಳು ಪದೇಪದೇ ಪಾದಚಾರಿ ಒತ್ತುವರಿ ಮಾಡಿಕೊಂಡಿರುವುದು ಗಮನಕ್ಕೆ ಬಂದಿರುವ ಕಾರಣ ಈ ವಿಷಯದ ಬಗ್ಗೆ ಪೊಲೀಸ್ ಅಧಿಕಾರಿಗಳ ಸಹಕಾರದೊಂದಿಗೆ ಒತ್ತುವರಿಯಾಗಿರುವ ಪಾದಚಾರಿ ಮಾರ್ಗವನ್ನು ತೆರೆವುಗೊಳಿಸುವುದಾಗಿ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

- **ಅರಣ್ಯ ಇಲಾಖೆಯ ವಿಷಯಗಳ ಬಗ್ಗೆ.**

ಈ ಹಿಂದಿನ ಸಭೆಯಲ್ಲಿ ವಿಜಯ ಎನ್‌ಕ್ಲೇವ್, ವಿಜಯಾ ಬ್ಯಾಂಕ್ ಕಾಲೋನಿಯಲ್ಲಿ ಮರದ ಕೊಂಬೆಯು ವಿಧ್ಯುತ್ ಕಂಬಕ್ಕೆ ಅಳವಡಿಸಿದ ಟ್ರಾನ್ಸ್‌ಫಾರ್ಮರ್ ಮೇಲೆ ಬೀಳುವ ಸಂಬಂಧವಿದ್ದು ಸಂಬಂಧಪಟ್ಟ ಅರಣ್ಯ ಅಧಿಕಾರಿಗಳಿಗೆ ಮರದ ಕೊಂಬೆಯನ್ನು ತೆರೆವುಗೊಳಿಸಲು ತಿಳಿಸಿದರು. ಈ ವಿಷಯದ ಸಂಬಂಧ ಸಭೆಯಲ್ಲಿ ಹಾಜರಿದ್ದ ಅರಣ್ಯ ಇಲಾಖೆಯವರಾದ ಶ್ರೀ ಮಹೇಶ್ ರವರು ಕೊಂಬೆಯನ್ನು ತೆರೆವುಗೊಳಿಸುವ ಸಂಬಂಧ ಸಂಬಂಧಪಟ್ಟ ಸ್ವತ್ತಿನ ಮಾಲೀಕರು ಸ್ವತ್ತಿನ ದಾಖಲೆಗಳೊಂದಿಗೆ ಅರಣ್ಯ ಇಲಾಖೆಗೆ ಅರ್ಜಿಸಲ್ಲಿಸಿದ ನಂತರ ಕ್ರಮಜರುಗಿಸುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ. ಅದರಂತೆ ಸದರಿ ದೂರುಗಳ ವಿರುದ್ದ ಕ್ರಮ ಕೈಗೊಂಡಿರುತ್ತಾರೆಂದು ಸಭೆಯಲ್ಲಿ ತಿಳಿಸಿದರು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು. ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

12/02/21

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು

*ಪ್ರತಿಯನ್ನು:*

1. *ಮಾನ್ಯ ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.*
2. *ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.*
3. *ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.*
4. *ಕಛೇರಿ ಪ್ರತಿ.*

Scanned with CamScanner